## 69. ಪ್ರಯೋಗಾಲಯಗಳ ಸಂಖ್ಯೆ ಏರಿಕೆ

ಭಾರತೀಯ ವೈದ್ಯಕೀಯ ಸಂಶೋಧನಾ ಪರಿಷತ್ತು (ಐಸಿಎಂಆರ್) ರಾಜ್ಯದಲ್ಲಿ ಇನ್ನೂ 5 ಪ್ರಯೋಗಾಲಯಗಳಿಗೆ ಅನುಮೋದನೆ ನೀಡಿದ್ದು, ಇದರಿಂದಾಗಿ ಕೋವಿಡ್ ಪ್ರಯೋಗಾಲಯಗಳ ಸಂಖ್ಯೆ 100ಕ್ಕೆ ಏರಿಕೆಯಾಗಿದೆ. ಪ್ರಾರಂಭಿಕ ಹಂತದಲ್ಲಿಯೇ ಕೊರೋನಾ ಸೋಂಕನ್ನು ಪತ್ತೆ ಮಾಡುವ ಸಂಬಂಧ ಕೋವಿಡ್ ಪರೀಕ್ಷೆಗಳ ಸಂಖ್ಯೆಯನ್ನು ಇನ್ನಷ್ಟು ಹೆಚ್ಚಿಸಬಹುದಾಗಿದೆ.

ದೇಶದಲ್ಲಿ ಮೊದಲ ಕೋವಿಡ್ ಪ್ರಕರಣ ವರದಿಯಾದಾಗ, ಮಾದರಿಗಳ ಪರೀಕ್ಷೆಗೆ ರಾಜ್ಯದಲ್ಲಿ ಒಂದೇ ಒಂದು ಪ್ರಯೋಗಾಲಯ ಇರಲಿಲ್ಲ. ಸೋಂಕು ಶಂಕಿತರ ಗಂಟಲ ದ್ರವದ ಮಾದರಿಗಳನ್ನು ಪುಣೆಯ ರಾಷ್ಟ್ರೀಯ ರೋಗ ಸೂಕ್ಷ್ಮಾಣು ಅಧ್ಯಯನ ಸಂಸ್ಥೆಗೆ (ಎನ್ಐವಿ)ಕಳುಹಿಸಲಾಗುತ್ತಿತ್ತು. ಇದರಿಂದಾಗಿ ಪರೀಕ್ಷಾ ವರದಿ ವಿಳಂಬವಾಗುತ್ತಿತ್ತು. ಫೆಬ್ರವರಿ ಅಂತ್ಯಕ್ಕೆ ಬೆಂಗಳೂರು ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆಯ (ಬಿಸಿಎಂಆರ್ಐ) ಹಾಗೂ ಎನ್ಐವಿ ಬೆಂಗಳೂರು ಕೇಂದ್ರದ ಪ್ರಯೋಗಾಲಯಕ್ಕೆ ಐಸಿಎಂಆರ್ ಅನುಮೋದನೆ ನೀಡಿತು. ಮೇ ಅಂತ್ಯಕ್ಕೆ ರಾಜ್ಯದಲ್ಲಿ ಪ್ರಯೋಗಾಲಯಗಳ ಸಂಖ್ಯೆ 60ಕ್ಕೆ ಏರಿಕೆ ಮಾಡಿ, ದಿನವೊಂದಕ್ಕೆ ಗರಿಷ್ಠ 13 ಸಾವಿರ ಆರ್‌ಟಿಪಿಸಿಆರ್ ಪರೀಕ್ಷೆ ನಡೆಸಲಾಯಿತು.

**50 ಸಾವಿರ ಗುರಿ:** ಸದ್ಯ ರಾಜ್ಯದಲ್ಲಿ ದಿನವೊಂದಕ್ಕೆ ಆ್ಯಂಟಿಜೆನ್ ಸೇರಿದಂತೆ 40 ಸಾವಿರಕ್ಕೂ ಅಧಿಕ ಕೋವಿಡ್ ಪರೀಕ್ಷೆ ನಡೆಸಲಾಗುತ್ತಿದೆ. ಆರ್‌ಟಿಪಿಸಿಆರ್ ಪರೀಕ್ಷೆಗಳ ಸಂಖ್ಯೆ 20 ಸಾವಿರದ ಗಡಿ ದಾಟಿದೆ. ಈವರೆಗೆ 16.68 ಲಕ್ಷ ಪರೀಕ್ಷೆಗಳನ್ನು ನಡೆಸಲಾಗಿದೆ. 45 ಸರ್ಕಾರಿ ಹಾಗೂ 55 ಖಾಸಗಿ ಪ್ರಯೋಗಾಲಯಗಳು ಕಾರ್ಯನಿರ್ವಹಿಸುತ್ತಿವೆ. ದಿನವೊಂದಕ್ಕೆ 50 ಸಾವಿರ ಕೋವಿಡ್ ಪರೀಕ್ಷೆ ನಡೆಸುವ ಗುರಿಯನ್ನು ರಾಜ್ಯ ಸರ್ಕಾರ ಹಾಕಿಕೊಂಡಿದೆ. ದೇಶದಲ್ಲಿ ಬೆರಳೆಣಿಕೆಯಷ್ಟು ರಾಜ್ಯಗಳು ಮಾತ್ರ ನೂರು ಹಾಗೂ ಅದಕ್ಕಿಂತ ಹೆಚ್ಚಿನ ಪ್ರಯೋಗಾಲಯಗಳನ್ನು ಹೊಂದಿದೆ.

ಅಧಿಕ ಕೋವಿಡ್ ಪರೀಕ್ಷೆ ನಡೆಸುವ ರಾಜ್ಯಗಳ ಪಟ್ಟಿಯಲ್ಲಿ ಕರ್ನಾಟಕ 8ನೇ ಸ್ಥಾನದಲ್ಲಿದೆ. ದೆಹಲಿ ಅಗ್ರಸ್ಥಾನದಲ್ಲಿದ್ದು, ಅಲ್ಲಿ ಪ್ರತಿ 10 ಲಕ್ಷ ಜನರಲ್ಲಿ 64,650 ಮಂದಿಗೆ ಪರೀಕ್ಷೆ ಮಾಡಲಾಗುತ್ತಿದೆ. ರಾಜ್ಯದಲ್ಲಿ ಈ ಸಂಖ್ಯೆ 25,072ರಷ್ಟಿದೆ. ಬಿಹಾರದಲ್ಲಿ ಅತ್ಯಂತ ಕಡಿಮೆ ಪರೀಕ್ಷೆ (7.120)ನಡೆಸಲಾಗುತ್ತಿದೆ. ಮಹಾರಾಷ್ಟ್ರದಲ್ಲಿ ಪ್ರತಿ ನೂರು ಪರೀಕ್ಷೆಗಳಲ್ಲಿ ಶೇ.19ರಷ್ಟು ಮಂದಿಗೆ ಸೋಂಕು ದೃಢಪಟ್ಟರೆ ರಾಜ್ಯದಲ್ಲಿ ಶೇ.9ರಷ್ಟು ಮಂದಿ ಸೋಂಕಿತರಾಗಿರುವುದು ಖಚಿತಪಡುತ್ತಿದೆ ಎಂದು ಆರೋಗ್ಯ ಇಲಾಖೆ ಮೂಲಗಳು ತಿಳಿಸಿವೆ.

**ಆ್ಯಂಬುಲೆನ್ಸ್ ನಿಯೋಜನೆ:–** ನಗರದಲ್ಲಿ ಕೊರೋನಾ ಸೋಂಕಿತರು ಮತ್ತು ಕೋವಿಡೇತರ ರೋಗಿಗಳನ್ನು ಆಸ್ಪತ್ರೆಗಳಿಗೆ, ಕೋವಿಡ್ ಆರೈಕೆ ಕೇಂದ್ರಗಳಿಗೆ ಕರೆದೊಯ್ಯಲು 665 ಆ್ಯಂಬುಲೆನ್ಸ್‌ಗಳನ್ನು ನಿಯೋಜಿಸಲಾಗಿದೆ ಎಂದು ವೈದ್ಯಕೀಯ ಶಿಕ್ಷಣ ಸಚಿವ ಡಾ:ಕೆ.ಸುಧಾಕರ್ ಅವರು ತಿಳಿಸಿದ್ದಾರೆ.

ಪೂರ್ವ ವಲಯದಲ್ಲಿ 127, ಪಶ್ಚಿಮ ವಲಯದಲ್ಲಿ 141, ದಕ್ಷಿಣದಲ್ಲಿ 110, ರಾಜರಾಜೇಶ್ವರಿ ನಗರದಲ್ಲಿ 40, ಬೊಮ್ಮನಹಳ್ಳಿಯಲ್ಲಿ 43, ಮಹದೇವಪುರದಲ್ಲಿ 52, ದಾಸರಹಳ್ಳಿಯಲ್ಲಿ 24, ಯಲಹಂಕದಲ್ಲಿ 33 ಆ್ಯಂಬುಲೆನ್ಸ್‌ಗಳ ವ್ಯವಸ್ಥೆ ಮಾಡಲಾಗಿದೆ. ಗೃಹ ಇಲಾಖೆಗೆ 11 ಹಾಗೂ ನಗರ ಜಿಲ್ಲೆಯ ವ್ಯಾಪ್ತಿಯಲ್ಲಿ 84 ಆ್ಯಂಬುಲೆನ್ಸ್‌ಗಳನ್ನು ನಿಯೋಜನೆ ಮಾಡಲಾಗಿದೆ ಎಂದು ಮಾಹಿತಿ ನೀಡಿದ್ದಾರೆ.

ಆಧಾರ:ಪ್ರಜಾವಾಣಿ, ದಿನಾಂಕ:10.08.2020